# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | | 423 |
| ಮಾನ್ಯ ಸದಸ್ಯರ ಹೆಸರು | | ಡಾ.ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 10.07.2023 |
| **ಪ್ರಶ್ನೆ** | | **ಉತ್ತರ** |
| (ಅ) | ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಎಷ್ಟು ಬೋಧಕ ಹುದ್ದೆಗಳು ಖಾಲಿ ಇವೆ: (ವಿಶ್ವವಿದ್ಯಾಲಯವಾರು ವಿವರ ಒದಗಿಸುವುದು) | ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ವಿವರವನ್ನು **ಅನುಬಂಧದಲ್ಲಿ** ನೀಡಲಾಗಿದೆ. |
| (ಆ) | ಖಾಯಂ ಬೋಧಕ ಸಿಬ್ಬಂದಿಗಳ ಕೊರತೆಯ ಕಾರಣದಿಂದ ವಿಶ್ವವಿದ್ಯಾಲಯಗಳಲ್ಲಿ ಶಿಕ್ಷಣದ ಗುಣಮಟ್ಟ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಪ್ರಸ್ತುತ ರಾಜ್ಯದ ವಿಶ್ವವಿದ್ಯಾಲಯಗಳು ಅಗತ್ಯತೆಗೆ ಅನುಗುಣವಾಗಿ ಖಾಯಂ ಉಪನ್ಯಾಸಕರನ್ನು ಒಳಗೊಂಡಂತೆ ಮಂಜೂರಾದ ಹುದ್ದೆಗಳಿಗೆ ಎದುರಾಗಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಬೋಧನಾ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ. |
| (ಇ) | ಯಾವ ಕಾಲಮಿತಿಯಲ್ಲಿ ವಿಶ್ವವಿದ್ಯಾಲಯಗಳಲ್ಲಿ ಬೋಧಕ ಹುದ್ದೆಗಳ ನೇಮಕ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು: | ವಿಶ್ವವಿದ್ಯಾಲಯಗಳ ಬೋಧಕ ಮತ್ತು ಇತರ ಶೈಕ್ಷಣಿಕ ಸಿಬ್ಬಂದಿಯ ನೇಮಕಾತಿ ಕ್ರಮ ವಿಧಾನಗಳು, ನೇಮಕಾತಿಗೆ ಅವಶ್ಯವಾಗುವ ಕನಿಷ್ಠ ವಿದ್ಯಾರ್ಹತೆ, ಸೇವಾ ಷರತ್ತುಗಳು ಹಾಗೂ ಉನ್ನತ ಶಿಕ್ಷಣದ ಗುಣಮಟ್ಟ ನಿರ್ವಹಣೆ/ಸಂರಕ್ಷಣೆಗೆ ಅಗತ್ಯವಾದ ಕ್ರಮಗಳು/ ಮಾರ್ಗೋಪಾಯಗಳ ಸಂಬಂಧದಲ್ಲಿ ಆರ್ಥಿಕ ಇಲಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಹಾಗೂ ಕಾನೂನು ಇಲಾಖೆಗಳ ಅಭಿಪ್ರಾಯ/ಸಲಹೆಗಳಿಗೆ ಅನುಗುಣವಾಗಿರುವಂತೆ ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ (ಯುಜಿಸಿ) ದಿನಾಂಕ: 18.07.2019ರ ಅಧಿಸೂಚನೆಯನ್ವಯ ಜಾರಿಗೊಳಿಸಲಾದ 2018ರ ವಿನಿಯಮಗಳನ್ನು ಅಳವಡಿಸಿಕೊಂಡು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಪರಿನಿಯಮಗಳನ್ನು ರಚಿಸಿಕೊಳ್ಳಲು ಸರ್ಕಾರದಿಂದ ಸೂಚಿಸಲಾಗಿರುತ್ತದೆ.<br><br>ಅದರಂತೆ ಎಲ್ಲಾ ವಿಶ್ವವಿದ್ಯಾಲಯಗಳು STATUTES RELATING TO APPOINTMENT AND PROMOTION OF TEACHERS AND OTHER ACADEMIC STAFF AND MAINTENANCE OF STANDARDS IN HIGHER EDUCATION IN THE UNIVERSITY, AS PER THE UGC REGULATIONS, 2018 ರ ಪರಿನಿಯಮವನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಪ್ರಸ್ತುತ ಪರಿಶೀಲನೆಯಲ್ಲಿದ್ದು, ಮಾನ್ಯ ರಾಜ್ಯಪಾಲರಿಂದ ಅಂಕಿತಗೊಂಡ ನಂತರ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತದೆ. |
| (ಈ) | ಹೊಸದಾಗಿ ಪ್ರಾರಂಭಿಸಲಾದ ವಿಶ್ವವಿದ್ಯಾಲಯಗಳಿಗೆ ಬೋಧಕ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ?(ವಿವರ ನೀಡುವುದು) | 2022-23ನೇ ಆಯವ್ಯಯ ಘೋಷಣೆಯಂತೆ ಪ್ರಾರಂಭಿಸಲ್ಪಟ್ಟ 7 ನೂತನ ವಿಶ್ವವಿದ್ಯಾಲಯಗಳು ಅವುಗಳ ಮಾತೃ ವಿಶ್ವವಿದ್ಯಾನಿಲಯಕ್ಕೆ ಮಂಜೂರಾಗಿರುವ ಹುದ್ದೆಗಳಿಂದ ಅವಶ್ಯವಿರುವ ಹುದ್ದೆಗಳನ್ನು ಬಳಸಿಕೊಂಡು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಕಾರ್ಯನಿರ್ವಹಿಸಬೇಕೆಂಬುದು ಸರ್ಕಾರದ ಉದ್ದೇಶವಾಗಿದೆ. |

ಸಂಖ್ಯೆ: ಇಡಿ 117 ಯುಎನ್ಇ 2023

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು.

**ಅನುಬಂಧ**

ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ವಿವರ ಈ ಕೆಳಕಂಡಂತಿವೆ.

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಖಾಲಿ ಇರುವ ಬೋಧಕ ಹುದ್ದೆಗಳು |
|---|---|---|
| 1 | ಮೈಸೂರು ವಿಶ್ವವಿದ್ಯಾಲಯ, ಮೈಸೂರು. | 407 |
| 2 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 426 |
| 3 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 213 |
| 4 | ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ | 202 |
| 5 | ಮಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 120 |
| 6 | ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ | 71 |
| 7 | ಕನ್ನಡ ವಿಶ್ವವಿದ್ಯಾಲಯ, ಹಂಪಿ. | 27 |
| 8 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು | 63 |
| 9 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ. | 91 |
| 10 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 41 |
| 11 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 89 |
| 12 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು | 15 |
| 13 | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ. | 25 |
| 14 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ. | 59 |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | 52 |
| 16 | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು | 23 |
| 17 | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ. | 10 |
| 18 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು. | 147 |
| 19 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕಾ, ಕೋಲಾರ ಜಿಲ್ಲೆ. | 56 |
| 20 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು. | 95 |
| 21 | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ. | ಹುದ್ದೆಗಳು ಮಂಜೂರಾಗಿರುವುದಿಲ್ಲ. |
| 22 | ಡಾ. ಬಿ. ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ, ಬೆಂಗಳೂರು. | 17 |
| 23 | ರಾಯಚೂರು ವಿಶ್ವವಿದ್ಯಾಲಯ, ಯರಗೇರಾ, ರಾಯಚೂರು. | 31 |
| 24 | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು. | ಹುದ್ದೆಗಳು ಮಂಜೂರಾಗಿರುವುದಿಲ್ಲ. |
| 25 | ಹಾಸನ ವಿಶ್ವವಿದ್ಯಾಲಯ, ಹಾಸನ | ಹೊಸದಾಗಿ ಪ್ರಾರಂಭಿಸಲಾಗಿರುವ 7 ವಿಶ್ವವಿದ್ಯಾಲಯಗಳ ಬೋಧಕ ಹುದ್ದೆಗಳಿಗೆ ಸಂಬಂಧಿಸಿದ ವಿವರಗಳನ್ನು ಉತ್ತರದ (ಈ) ಭಾಗದಲ್ಲಿ ನೀಡಲಾಗಿದೆ. |
| 26 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | |
| 27 | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | |
| 28 | ಬೀದರ್ ವಿಶ್ವವಿದ್ಯಾಲಯ, ಬೀದರ್ | |
| 29 | ಚಾಮರಾಜ ನಗರ ವಿಶ್ವವಿದ್ಯಾಲಯ, ಚಾಮರಾಜನಗರ, | |
| 30 | ಕೊಡಗು ವಿಶ್ವವಿದ್ಯಾಲಯ,ಕೊಡಗು ಜಿಲ್ಲೆ. | |
| 31 | ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ | |